ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು

Office of the Deputy Commissioner, Mysuru District, Mysuru

Phone: 0821-2424079, 2422302 E-Mail:dcofficmysuru@gmail.com

ಸಂ:MYSDC-ADM1/CER/1/2026,( E- 1149548 )

ವಿಷಯ: 2026ನೇ ಸಾಲಿನ ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮನಿರ್ದೇಶನಗಳನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅ.ಸ.ಪತ್ರ.ಸಂಖ್ಯೆ:ಸಿಆಸುಇ (ಆಸು) 16 ಇಆಸು 2026 ದಿನಾಂಕ: 30.01.2026.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ (ಆಸು) 16 ಇಆಸು 2026 ದಿನಾಂಕ: 30.01.2026

*****

ರಾಜ್ಯ ಸರ್ಕಾರದ ಅಧಿಕಾರಿ/ನೌಕರರಿಗೆ "ಸರ್ವೋತ್ತಮ ಸೇವಾ ಪ್ರಶಸ್ತಿ" ನೀಡುವ ಯೋಜನೆಯನ್ನು 2012 ರಿಂದ ಜಾರಿಗೆ ತರಲಾಗಿದೆ. ಪ್ರಸ್ತುತ 2026 ನೇ ಸಾಲಿನಲ್ಲಿ ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ" ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ/ನೌಕರರು ತಮ್ಮ ನಾಮನಿರ್ದೇಶನಗಳನ್ನು ಆನ್ ಲೈನ್ ಮೂಲಕ ಮಾತ್ರ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ.

ಪ್ರಶಸ್ತಿಯು ರಾಜ್ಯ ಮಟ್ಟ ಮತ್ತು ಜಿಲ್ಲಾ ಮಟ್ಟದಲ್ಲಿನ ಎರಡು ಹಂತಗಳಿಗೂ ಅರ್ಜಿ ಸಲ್ಲಿಸಲು ಬಯಸುವವರು, ಪ್ರತಿ ಹಂತಕ್ಕೂ ಪ್ರತ್ಯೇಕವಾಗಿ ನಾಮನಿರ್ದೇಶನ ಸಲ್ಲಿಸಬೇಕು. ನಾಮನಿರ್ದೇಶನವನ್ನು ಸಲ್ಲಿಸಬಯಸುವವರು https://dparar.karnataka.gov.in/ ಅಥವಾ https://sarvothamaawards.karnataka.gov.in ಜಾಲತಾಣದ ಮೂಲಕ ದಿನಾಂಕ 03-02-2026 ರಿಂದ 25-02-2026 ರೊಳಗಾಗಿ ಸಲ್ಲಿಸಲು ಸೂಚಿಸಲಾಗಿದೆ. ನಾಮನಿರ್ದೇಶನವನ್ನು ಕನ್ನಡ ಅಥವಾ ಇಂಗ್ಲಿಷ್ ಭಾಷೆಯಲ್ಲಿ ಸಲ್ಲಿಸಬಹುದಾಗಿದ್ದು, ಕನ್ನಡದಲ್ಲಿ ಸಲ್ಲಿಸುವವರು ನುಡಿ 6.0 ಆವೃತ್ತಿಯನ್ನು ಮಾತ್ರ ಬಳಸುವಂತೆ ಸೂಚಿಸಿದೆ.

ಆದ್ದರಿಂದ, ತಮ್ಮ ಇಲಾಖೆಯಲ್ಲಿ/ಕಚೇರಿಯಲ್ಲಿ/ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಅಧಿಕಾರಿ/ನೌಕರರಿಗೆ ಮೇಲ್ಕಂಡ ಮಾಹಿತಿಯನ್ನು ತಿಳಿಸಿ, ಹೆಚ್ಚಿನ ಸಂಖ್ಯೆಯಲ್ಲಿ ನಾಮನಿರ್ದೇಶನ ಸಲ್ಲಿಸುವ ಬಗ್ಗೆ ಸೂಕ್ತ ನಿರ್ದೇಶನ ನೀಡಲು ಕ್ರಮ ಕೈಗೊಳ್ಳುವಂತೆ ಸೂಚಿಸಿದೆ. ಸದರಿ ದಿನಾಂಕದ ನಂತರ ಬರುವ ನಾಮನಿರ್ದೇಶನಗಳನ್ನು ಸ್ವೀಕರಿಸಲಾಗುವುದಿಲ್ಲ.

Digitally signed by
P Shivaraju
Date: 09-02-2026

ಅಪರ ಜಿಲ್ಲಾಧಿಕಾರಿ,
ಮೈಸೂರು ಜಿಲ್ಲೆ, ಮೈಸೂರು.

ರವರಿಗೆ,

ತಮ್ಮ ಇಲಾಖೆಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು

1. ಜಿಲ್ಲೆಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು.
2. ಉಪ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮೈಸೂರುರವರಿಗೆ ಕಳುಹಿಸುತ್ತಾ, ಜಿಲ್ಲೆಯ ಎಲ್ಲಾ ದಿನ ಪತ್ರಿಕೆಗಳಲ್ಲಿ ಸರ್ಕಾರಕ್ಕೆ ವೆಚ್ಚ ಬಾರದಂತೆ ಪ್ರಕಟಿಸಲು ಕ್ರಮವಹಿಸುವಂತೆ ಕೋರಲಾಗಿದೆ.
3. ಜಿಲ್ಲೆಯ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು.

ರಮಣದೀಪ್ ಚೌಧರಿ ಭಾ.ಆ.ಸೇ.,
ಸರ್ಕಾರದ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)

ಕರ್ನಾಟಕ ಸರ್ಕಾರದ ಸಚಿವಾಲಯ
ನಂ. 612, 6ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001
ದೂರವಾಣಿ ಸಂಖ್ಯೆ: 080-2203 2825, 22353985
ಇ-ಮೇಲ್ : prsar-dpar@karnataka.gov.in

ಅ.ಸ.ಪತ್ರ ಸಂಖ್ಯೆ: ಸಿಆಸುಇ (ಆಸು) 16 ಇಆಸು 2026

ದಿನಾಂಕ : 30-01-2026

ಮಾನ್ಯರೇ,

**ವಿಷಯ:** 2026 ನೇ ಸಾಲಿನ ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮನಿರ್ದೇಶನಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ:** ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:30-01-2026.

******

ಮೇಲಿನ ವಿಷಯಕ್ಕೆ ಸಂಬಂಧಸಿದಿಂತೆ, ಉಲ್ಲೇಖಿತ ಸುತ್ತೋಲೆ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. **2026 ನೇ ಸಾಲಿನ ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ"** ಪಡೆಯಲು ರಾಜ್ಯ ಸರ್ಕಾರದ ಅರ್ಹ ಅಧಿಕಾರಿ/ನೌಕರರು ತಮ್ಮ ನಾಮನಿರ್ದೇಶನಗಳನ್ನು ಆನ್ ಲೈನ್ ಮೂಲಕ ಮಾತ್ರ ದಿನಾಂಕ:03-02-2026 ರಿಂದ 25-02-2026ರ ಒಳಗಾಗಿ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ.

ಆದ್ದರಿಂದ, ತಮ್ಮ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ/ನೌಕರರು ಸದರಿ ಪ್ರಶಸ್ತಿಗೆ ಹೆಚ್ಚಿನ ಸಂಖ್ಯೆಯಲ್ಲಿ ನಾಮನಿರ್ದೇಶನ ಮಾಡುವಂತೆ ಸೂಕ್ತ ಪ್ರಚಾರ ಕೈಗೊಳ್ಳಬೇಕೆಂದು ತಮ್ಮನ್ನು ಕೋರಿದೆ.

ಆದರಗಳೊಂದಿಗೆ,

ತಮ್ಮ ವಿಶ್ವಾಸಿ,

ಎಲ್ಲಾ ಜಿಲ್ಲಾಧಿಕಾರಿಗಳು

# ಕರ್ನಾಟಕ ಸರ್ಕಾರ

**ಸಂಖ್ಯೆ:** ಸಿಆಸುಇ (ಆಸು) 16 ಇಆಸು 2026

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ.ಬಿ.ಆರ್ ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:-30-01-2026.

## ಸುತ್ತೋಲೆ

**ವಿಷಯ:** 2026 ನೇ ಸಾಲಿನ ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ :** 1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 105 ಇಆಸು 2011, ದಿನಾಂಕ: 20-11-2012
2. ತಿದ್ದುಪಡಿ ಆದೇಶ ಸಂಖ್ಯೆ: ಸಿಆಸುಇ 105 ಇಆಸು 2011, ದಿನಾಂಕ: 15-04-2013.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 104 ಇಆಸು 2019, ದಿನಾಂಕ:07-12-2019.
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 11 ಇಆಸು 2022. ದಿನಾಂಕ:19-03-2022.

...............

ರಾಜ್ಯ ಸರ್ಕಾರದ ಅಧಿಕಾರಿ/ನೌಕರರಿಗೆ "ಸರ್ವೋತ್ತಮ ಸೇವಾ ಪ್ರಶಸ್ತಿ" ನೀಡುವ ಯೋಜನೆಯನ್ನು 2012 ರಿಂದ ಜಾರಿಗೆ ತರಲಾಗಿದೆ. ಪ್ರಸ್ತುತ 2026 ನೇ ಸಾಲಿನಲ್ಲಿ **ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ"** ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ/ನೌಕರರು ತಮ್ಮ ನಾಮನಿರ್ದೇಶನಗಳನ್ನು ಆನ್ ಲೈನ್ ಮೂಲಕ ಮಾತ್ರ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ.

"ಸರ್ವೋತ್ತಮ ಸೇವಾ ಪ್ರಶಸ್ತಿ"ಯ ಎರಡು ಹಂತದ ಪ್ರಶಸ್ತಿಗಳಿಗೂ ಅರ್ಜಿ ಸಲ್ಲಿಸಬಯಸುವವರು, **ಪ್ರತಿ ಹಂತಕ್ಕೂ ಪ್ರತ್ಯೇಕವಾಗಿ ತಮ್ಮ ನಾಮ ನಿರ್ದೇಶನವನ್ನು ಸಲ್ಲಿಸತಕ್ಕದ್ದು**. ನಾಮನಿರ್ದೇಶನವನ್ನು ಸಲ್ಲಿಸಬಯಸುವವರು ಜಾಲತಾಣ https://dparar.karnataka.gov.in/ ಅಥವಾ https://sarvothamaawards.karnataka.gov.in ದ **ಮೂಲಕ ದಿನಾಂಕ: 03-02-2026 ರಿಂದ 25-02-2026 ರೊಳಗಾಗಿ ಸಲ್ಲಿಸುವುದು**. ಉಲ್ಲೇಖಿತ ಆದೇಶದ ಪ್ರತಿಗಳನ್ನು ಜಾಲತಾಣ https://dparar.karnataka.gov.in/ ರ ಸರ್ಕಾರದ ಆದೇಶಗಳು-ತರಬೇತಿ ಇಲ್ಲಿ ಅವಲೋಕಿಸಬಹುದಾಗಿದೆ.

ರಾಜ್ಯ / ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯ ನಾಮನಿರ್ದೇಶನವನ್ನು **ಕನ್ನಡ ಅಥವಾ ಇಂಗ್ಲೀಷ್** ನಲ್ಲಿ ಸಲ್ಲಿಸಬಹುದಾಗಿದ್ದು, ಕನ್ನಡದಲ್ಲಿ ಸಲ್ಲಿಸಲು **ನುಡಿ 6.0 ಆವೃತ್ತಿಯನ್ನು ಮಾತ್ರ** ಬಳಸುವಂತೆ ಸೂಚಿಸಿದೆ.

| ಕ್ರಮ ಸಂಖ್ಯೆ | ಪ್ರಶಸ್ತಿ ವಿವರ | ಪ್ರಶಸ್ತಿಗಳ ಸಂಖ್ಯೆ |
|---|---|---|
| 1 | ಜಿಲ್ಲಾ ಮಟ್ಟ (31 ಜಿಲ್ಲೆ X10 ಪ್ರಶಸ್ತಿ) | 310 |
| 2 | ರಾಜ್ಯ ಮಟ್ಟ | 30 |

ಜಾಲತಾಣದಲ್ಲಿ ಮಾಹಿತಿ/ವಿವರಗಳನ್ನು ದಾಖಲಿಸಲು ಯಾವುದೇ ರೀತಿಯ ತಾಂತ್ರಿಕ ಅಡಚಣೆ ಉಂಟಾದಲ್ಲಿ pmtech.webportal@karnataka.gov.in ನಲ್ಲಿ ಸ್ಪಷ್ಟತೆ ಪಡೆಯುವುದು.

Nahid — 30/1/26

(ನಾಹೀದ್ ಅಂಜುಮ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಆಸು-ತರಬೇತಿ ಮತ್ತು ಮಾಹಿತಿ ಹಕ್ಕು ಶಾಖೆ).

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ,
3. ಎಲ್ಲಾ ಜಿಲ್ಲಾಧಿಕಾರಿಯವರಿಗೆ.
4. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರಿಗೆ.

} **ಕಛೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.**

5. ಕಚೇರಿ ಪ್ರತಿ/ಹೆಚ್ಚುವರಿ ಪ್ರತಿ.